ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಅರಮನೆ ರಸ್ತೆ, ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/04/ಅಕಾನಿ-ಮಂಜೂರು/2023-24 ದಿನಾಂಕ: 13.10.2023

# ಅಧಿಕೃತ ಜ್ಞಾಪನ

ವಿಷಯ: ಅನ್ಯಕಾರ್ಯನಿಮಿತ್ತ ಮಂಜೂರು ಮಾಡುವ ಬಗ್ಗೆ.

ಉಲ್ಲೇಖ: ಮಾನ್ಯ ಉನ್ನತ ಶಿಕ್ಷಣಸಚಿವರ ಆಪ್ತ ಕಾರ್ಯದರ್ಶಿಗಳ ಟಿಪ್ಪಣಿ ಸಂಖ್ಯೆ:ಉಶಿಸ/ಆಕಾ/295/2023 ದಿನಾಂಕ:07.10.2023.

* * * * * *

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಭಾರತ ಸರ್ಕಾರ, ಶಿಕ್ಷಣ ಸಚಿವಾಲಯದ ವತಿಯಿಂದ **Asian Summit on Education & Skill (ASES)** ಹಾಗೂ **Didac India 2023** ಅಂತರರಾಷ್ಟ್ರೀಯ ಸಮ್ಮೇಳನವನ್ನು ದಿನಾಂಕ:17.10.2023 ರಿಂದ 19.10.2023 ರವರೆಗೆ **Bangalore International Exhibition Center (BIEC), Bengaluru** ಇಲ್ಲಿ ಏರ್ಪಡಿಸಲಾಗಿದ್ದು, ಸದರಿ ಸಮ್ಮೇಳನದಲ್ಲಿ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಉಪನ್ಯಾಸಕರುಗಳು ಭಾಗವಹಿಸಲು ಅನುಮತಿ ನೀಡುವಂತೆ ಉಲ್ಲೇಖಿತ ಪತ್ರದಲ್ಲಿ ಕೋರಿರುತ್ತಾರೆ.

ಈ ಸಂಬಂಧ ದಿನಾಂಕ:17.10.2023 ರಿಂದ 19.10.2023 ರವರೆಗೆ ನಡೆಯಲಿರುವ **Asian Summit on Education & Skill (ASES)** ಹಾಗೂ **Didac India 2023** ಅಂತರರಾಷ್ಟ್ರೀಯ ಸಮ್ಮೇಳನದಲ್ಲಿ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಜಿಲ್ಲೆಗಳ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಉಪನ್ಯಾಸಕರುಗಳು ಯಾವುದಾದರೂ ಒಂದು ದಿನ ಭಾಗವಹಿಸಲು ಅನುಮತಿ ನೀಡಲಾಗಿದೆ. ಹಾಗೂ ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸಿದ ಅಧ್ಯಾಪಕರುಗಳಿಗೆ ಸರ್ಕಾರದ/ಇಲಾಖೆಯ ವತಿಯಿಂದ ಯಾವುದೇ ಭತ್ಯೆಗಳಿಲ್ಲದೆ ಅನ್ಯಕಾರ್ಯನಿಮಿತ್ತ ಮಂಜೂರು ಮಾಡಲಾಗಿದೆ.

ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸುವ ಅಧ್ಯಾಪಕರುಗಳು ಲಿಂಕ್ : **https://didacindia.com/registration/** ನಲ್ಲಿ ನೋಂದಣಿ ಮಾಡಿಕೊಳ್ಳಲು ಸೂಚಿಸಲಾಗಿದೆ.

(ಮಾನ್ಯ ಆಯುಕ್ತರ ಆದೇಶದ ಮೇರೆಗೆ)

13/10/23
ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ: ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ

1. ಬೆಂಗಳೂರು ಪ್ರಾದೇಶಿಕ ಜಂಟಿ ಕಛೇರಿಯ ವ್ಯಾಪ್ತಿಯ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ
2. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು – ತಮ್ಮ ವ್ಯಾಪ್ತಿಗೆ ಬರುವ ಜಿಲ್ಲೆಗಳ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಉಪನ್ಯಾಸಕರುಗಳು ಭಾಗವಹಿಸಲು ಅಗತ್ಯ ಕ್ರಮವಹಿಸುವುದು.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು. – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.
4. ಕಛೇರಿ ಪ್ರತಿ.